ದಸ್ತಾವೇಜು

ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ: ಪಪೂಶಿಇ/ಶೈ.ಶಾ.04/ಭಾ.ವಿ./2018-19 ದಿನಾಂಕ: 17-01-2019

# ಜ್ಞಾಪನ

ವಿಷಯ: 2018-19ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ/ದ್ವಿತೀಯ ಪಿಯುಸಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ಶ್ರವಣದೋಷ, ಮೂಕತನ, ಕಲಿಕಾ ನ್ಯೂನತೆ ಮತ್ತು ಬುದ್ಧಿಮಾಂದ್ಯತೆಯಿಂದ ಬಳಲುತ್ತಿರುವ ವಿದ್ಯಾರ್ಥಿಗಳಿಗೆ ಭಾಗ-Iರಲ್ಲಿ ಒಂದು ಭಾಷಾ ವಿಷಯ ಕಲಿಕೆಯಿಂದ ವಿನಾಯಿತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಮಮ 65 ಪಿಹೆಚ್‌ಪಿ 2000, ಬೆಂಗಳೂರು, ದಿನಾಂಕ: 10-03-2000
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 42 ಟಿಪಿಯು 2004 ದಿನಾಂಕ: 26-03-2004
3. ಸರ್ಕಾರದ ಸುತ್ತೋಲೆ ಸಂಖ್ಯೆ: 370 ಯೋಯೋಕ 2009 ದಿನಾಂಕ: 17-02-2010
4. ಈ ಕಚೇರಿಯ ಸುತ್ತೋಲೆ ಸಂಖ್ಯೆ: ಪಿಯುಇ/ಶೈ.ಶಾ-04/ಹೆ.ಸೌ.ನೀ.ಕು-01/2014-15 ದಿನಾಂಕ: 10-02-2015
5. ಸರ್ಕಾರದ ಆದೇಶ ಸಂಖ್ಯೆ: ಇಡಿ 15 ಟಿಪಿಯು 2018, ಬೆಂಗಳೂರು, ದಿನಾಂಕ: 28-02-2018
6. ಈ ಕಚೇರಿಯ ಸುತ್ತೋಲೆ ಸಂಖ್ಯೆ: ಪಪೂಶಿಇ/ಶೈ.ಶಾ-04/ಅ.ವಿ.ವಿ.ಹೆ.ಸೌ/2017-18 ದಿನಾಂಕ: 28-02-2018
7. ಪದವಿ ಪೂರ್ವ ಶಿಕ್ಷಣ ಇಲಾಖೆಯ 2018-19ನೇ ಸಾಲಿನ ಮಾರ್ಗಸೂಚಿಗಳು.
8. ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು, ಜಿಲ್ಲಾ ಉಪ ನಿರ್ದೇಶಕರುಗಳಿಂದ ಭಾಷಾ ವಿನಾಯಿತಿ ನೀಡಲು ಕೋರಿ ಬಂದಿರುವ ಪ್ರಸ್ತಾವನೆಗಳು.

***

ಪ್ರಸ್ತಾವನೆ:

ರಾಜ್ಯದ ವಿವಿಧ ಜಿಲ್ಲೆಗಳ ಉಪನಿರ್ದೇಶಕರುಗಳ ಮೂಲಕ ಸಂಬಂಧಿಸಿದ ಜಿಲ್ಲೆಗಳ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರು 2018-19ನೇ ಶೈಕ್ಷಣಿಕ ಸಾಲಿನಲ್ಲಿ ತಮ್ಮ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ಶ್ರವಣದೋಷ, ಮೂಕತನ ಮತ್ತು ಕಲಿಕಾ ನ್ಯೂನತೆ ಹಾಗೂ ಬುದ್ಧಿಮಾಂದ್ಯದಿಂದ ಬಳಲುತ್ತಿರುವ ವಿದ್ಯಾರ್ಥಿಗಳಿಗಾಗಿ ಉಲ್ಲೇಖ: 01 ರಿಂದ 06 ರವರೆಗಿನ ಸರ್ಕಾರಿ ಆದೇಶದಂತೆ ಹಾಗೂ ಉಲ್ಲೇಖ: 7ರಲ್ಲಿನ ಪದವಿ ಪೂರ್ವ ಶಿಕ್ಷಣ ಇಲಾಖೆಯ 2018-19ನೇ ಸಾಲಿನ ಮಾರ್ಗಸೂಚಿಯಂತೆ, ಪದವಿ ಪೂರ್ವ ಶಿಕ್ಷಣ ಹಂತದಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ನೀಡಿರುವ ಸೌಲಭ್ಯಗಳನ್ನು ಒದಗಿಸುವಂತೆ ಕೋರಿರುತ್ತಾರೆ. ವಿದ್ಯಾರ್ಥಿಗಳು ಸೌಲಭ್ಯವನ್ನು ಪಡೆಯಲು ಅಗತ್ಯ ದಾಖಲೆಗಳಾದ ವೈದ್ಯಕೀಯ ಪ್ರಮಾಣ ಪತ್ರ ಹಾಗೂ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಅಂಕಪಟ್ಟಿಯನ್ನು ಲಗತ್ತಿಸಿ, ಪ್ರಥಮ/ದ್ವಿತೀಯ ಪಿಯುಸಿ ಪರೀಕ್ಷೆಯ ಭಾಗ-01ರಲ್ಲಿ ಒಂದು ಭಾಷಾ ವಿಷಯ ಕಲಿಕೆಯಿಂದ ವಿನಾಯಿತಿ ನೀಡುವಂತೆ ಕೋರಿ, ಅರ್ಜಿಗಳನ್ನು ಪ್ರಾಂಶುಪಾಲರುಗಳಿಗೆ ಸಲ್ಲಿಸಿರುತ್ತಾರೆ. ಸಂಬಂಧಿಸಿದ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರುಗಳ ಮೂಲಕ ಜಿಲ್ಲಾ ಉಪನಿರ್ದೇಶಕರಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

-2

**ಆದೇಶ:**

2018–19ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ/ದ್ವಿತೀಯ ಪಿಯುಸಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ಶ್ರವಣದೋಷ, ಮೂಕತನ, ಕಲಿಕಾ ನ್ಯೂನತೆ ಮತ್ತು ಬುದ್ಧಿಮಾಂದ್ಯತೆಯಿಂದ ಬಳಲುತ್ತಿರುವ ವಿದ್ಯಾರ್ಥಿಗಳಿಗೆ ಭಾಗ–1ರಲ್ಲಿ ಒಂದು ಭಾಷಾ ವಿಷಯ ಕಲಿಕೆಯಿಂದ ವಿನಾಯಿತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗಳನ್ನು ಉಲ್ಲೇಖ: 1 ರಿಂದ 6 ರವರೆಗಿನ ಸರ್ಕಾರದ ಆದೇಶಗಳನ್ವಯ ಹಾಗೂ ಉಲ್ಲೇಖ: 7ರಲ್ಲಿನ ಪದವಿ ಪೂರ್ವ ಶಿಕ್ಷಣ ಇಲಾಖೆಯ 2018–19ನೇ ಸಾಲಿನ ಮಾರ್ಗಸೂಚಿಯಂತೆ ಪರಿಶೀಲಿಸಿ, ಸದರಿ ಜ್ಞಾಪನದೊಂದಿಗೆ ಅನುಬಂಧಿಸಿರುವ ಅನುಬಂಧ–1ರಲ್ಲಿ ನಮೂದಿಸಿರುವ ವಿದ್ಯಾರ್ಥಿಗಳಿಗೆ ಪ್ರಥಮ/ದ್ವಿತೀಯ ಪಿಯುಸಿ ತರಗತಿಯಲ್ಲಿ ಭಾಗ–01ರಲ್ಲಿ ವಿದ್ಯಾರ್ಥಿಯ ಹೆಸರಿನ ಮುಂದೆ ನಮೂದಿಸಿರುವ ಭಾಷಾ ವಿಷಯದಲ್ಲಿ ಅಭ್ಯಾಸ ಮಾಡುವುದರಿಂದ ವಿನಾಯಿತಿ ನೀಡಲಾಗಿದೆ ಎಂದು ಆದೇಶಿಸಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳನ್ನು:**

1. ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ,

**ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:–**

2. ಜಂಟಿ ನಿರ್ದೇಶಕರು (ಪರೀಕ್ಷೆ), ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು
3. ಸಹಾಯಕ ನಿರ್ದೇಶಕರು (ಪರೀಕ್ಷೆ), ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
4. ಹಿರಿಯ ಪ್ರೋಗ್ರಾಮರ್, ಗಣಕ ವಿಭಾಗ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು
5. ಕಚೇರಿ ಪ್ರತಿ.